# 2 ಕೋಟಿ ಯುವಕರಿಗೆ ಕೌಶಲ್ಯ ತರಬೇತಿ

- 300ಕ್ಕೂ ಹೆಚ್ಚು ಖರೀದಿದಾರರು
- 55 ದೇಶಗಳ ಪ್ರತಿನಿಧಿಗಳು ಭಾಗಿ

ಸಂ.ಕ. ಸಮಾಚಾರ ಬೆಂಗಳೂರು

ಕೃಷಿ, ವ್ಯಾಪಾರ, ಬಯೋಟೆಕ್, ಮಾಹಿತಿ ತಂತ್ರಜ್ಞಾನ, ಮೂಲಸೌಕರ್ಯ ಹಾಗೂ ಸ್ಟಾರ್ಟ್‌ಅಪ್‌ಗಳ ಅಭಿವೃದ್ಧಿಗೆ ಪೂರಕವಾದ ನೀತಿಗಳನ್ನು ಪ್ರಕಟಿಸಿದ್ದು ಇದರಿಂದಾಗಿ ಕೈಗಾರಿಕೀಕರಣದ ಪ್ರಗತಿಯಲ್ಲಿ ಸೇವಾವಲಯ ಪ್ರಮುಖ ಪಾತ್ರವಹಿಸಿದೆ ಎಂದು ಭಾರೀ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವ ಜಗದೀಶ್ ಶೆಟ್ಟರ್ ಹೇಳಿದರು.



ಬೆಂಗಳೂರಿನಲ್ಲಿ ಮಂಗಳವಾರದಿಂದ ಆರಂಭವಾದ ಮೂರು ದಿನಗಳ ಸೇವಾವಲಯದ ಜಾಗತಿಕ ಪ್ರದರ್ಶನವನ್ನು ಕೇಂದ್ರದ ವಾಣಿಜ್ಯ ಹಾಗೂ ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಉದ್ಘಾಟಿಸಿದರು. ಈ ವೇಳೆ ಸಚಿವ ಜಗದೀಶ್ ಶೆಟ್ಟರ್, ಸ್ಪೆಂಟಾ ಮೆಡಿಕಲ್ ಲಿ ಮುಖ್ಯಸ್ಥ ಮನೇಶ್ ದಾಬಿರ್, ಉದ್ಯಮಿ ವಿಕ್ರಮ್ ಕಿರ್ಲೋಸ್ಕರ್ ಮತ್ತಿತರರಿದ್ದರು.

ಮಂಗಳವಾರ ಆರಂಭವಾದ ಮೂರು ದಿನಗಳ ಗ್ಲೋಬಲ್ ಎಕ್ಸಿಬಿಷನ್ ಆನ್ ಸರ್ವೀಸಸ್ (ಜಿಇಎಸ್) ಸಮಾವೇಶದಲ್ಲಿ ಮಾತನಾಡಿದ ಅವರು, ಈ ಕ್ಷೇತ್ರದಲ್ಲಿ ಕರ್ನಾಟಕ ಮುಂಚೂಣಿಯಲ್ಲಿದೆ ಅಲ್ಲದೇ ಹಲವಾರು ವೈದ್ಯಕೀಯ ಶಿಕ್ಷಣ ಸಂಸ್ಥೆಗಳನ್ನು ಹೊಂದಿ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ನಾಯಕ ಎಂದು ಕರೆಯಿಸಿಕೊಳ್ಳುತ್ತಿದೆ. ಇಲ್ಲಿನ ಆಸ್ಪತ್ರೆಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಸರು ಗಳಿಸಿವೆ ಎಂದು ಹೇಳಿದರು.

ರಾಜ್ಯದಲ್ಲಿ ಐಎಎಂ, ಐಐಟಿ, ಐಐಎಸ್‌ಸಿ ಯಂತಹ ಖ್ಯಾತ ಶಿಕ್ಷಣ ಸಂಸ್ಥೆಗಳು ಇರುವುದರಿಂದ ಇಂದು ಶೇ.26ಕ್ಕಿಂತಲೂ ಹೆಚ್ಚು ವಿದ್ಯಾರ್ಥಿಗಳು ಕರ್ನಾಟಕವನ್ನು ಆಯ್ಕೆ ಮಾಡಿಕೊಳ್ಳುತ್ತಿದ್ದಾರೆ. ಮುಂದಿನ ಹತ್ತು ವರ್ಷಗಳಲ್ಲಿ ಸುಮಾರು 2 ಕೋಟಿಗೂ ಹೆಚ್ಚು ಯುವಕರನ್ನು ಕೌಶಲ್ಯವಂತರನ್ನಾಗಿಸುವ ಗುರಿ ಹೊಂದಲಾಗಿದೆ. ಇದಕ್ಕೆ ಬೇಕಾದ ಸೌಕರ್ಯವನ್ನು ಸರ್ಕಾರ ನೀಡುತ್ತದೆ ಎಂದರು.

ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್ ಮಾತನಾಡಿ, ರಾಜ್ಯದಲ್ಲಿ ಸೇವಾಕ್ಷೇತ್ರವು ಶೇ.68ಕ್ಕೂ ಅಧಿಕ ಕೊಡುಗೆ ನೀಡುತ್ತಿದೆ. ಆರ್ಥಿಕ ಸಮೀಕ್ಷೆ ಪ್ರಕಾರ 2018–19ನೇ ಹಣಕಾಸು ವರ್ಷದಲ್ಲಿ ಈ ಕ್ಷೇತ್ರ ಶೇ.12.3 ರಷ್ಟು ಪ್ರಗತಿ ಸಾಧಿಸಲಿದೆ ಎಂದು ತಿಳಿಸಿದರು.

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಪ್ರಧಾನ ಕಾರ್ಯದರ್ಶಿ ಗೌರವ್ ಗುಪ್ತ ಮಾತನಾಡಿ, ರಾಜ್ಯದ ಒಟ್ಟು ದೇಸೀಯ ಉತ್ಪನ್ನಕ್ಕೆ ಶೇ.68 ರಷ್ಟು ಕೊಡುಗೆ ನೀಡುತ್ತಿರುವ ಸೇವಾ ವಲಯವು ಭಾರತದ ಸೇವಾ ಬೆಳವಣಿಗೆಯಲ್ಲಿ ಪ್ರಮುಖಪಾತ್ರ ವಹಿಸುತ್ತಿದೆ. ಇಲ್ಲಿ ಅತ್ಯುತ್ಸಾಹಿ ಮಾನವ ಸಂಪನ್ಮೂಲವಿದ್ದು, ಈ ಮೂಲಕ ದೇಶದಲ್ಲಿ ಕಾರ್ಮಿಕ ಉತ್ಪಾದಕತೆಯಲ್ಲಿ ಎರಡನೇ ಸ್ಥಾನವನ್ನು ಪಡೆದಿದೆ ಎಂದು ಹೇಳಿದರು.

ಸ್ಪೆಂಟಾ ಮೆಡಿಕಲ್ ಲಿ ಮುಖ್ಯಸ್ಥ ಮನೇಶ್ ದಾಬಿರ್, ಉದ್ಯಮಿ ವಿಕ್ರಮ್ ಕಿರ್ಲೋಸ್ಕರ್, ಜಿಂಬಾಂಬ್ವೆದ ವಾಣಿಜ್ಯ ಸಚಿವ ರಾಜೇಶ್‌ಕುಮಾರ್ ಮೋದಿ, ಜಸ್ಟೀಸ್ ಪ್ರತಿಭಾಸಿಂಗ್, ಇಲಾಖೆಯ ಕಾರ್ಯದರ್ಶಿ ಅನೂಪ್ ವಧವನ್ ಮತ್ತಿತರರಿದ್ದರು. ಮೂರು ದಿನಗಳ ಕಾಲ ವಿದೇಶದ 300ಕ್ಕೂ ಹೆಚ್ಚು ಖರೀದಿದಾರರು, 55 ದೇಶಗಳ ಪ್ರತಿನಿಧಿಗಳು, 80 ಉಪನ್ಯಾಸಕರು ಸೇರಿದಂತೆ ದೇಶ–ವಿದೇಶಗಳ ಗಣ್ಯರು ಪಾಲ್ಗೊಳ್ಳಲಿದ್ದಾರೆ.

ಉತ್ತರಖಂಡ, ಉತ್ತರ ಪ್ರದೇಶ, ಮಹಾರಾಷ್ಟ್ರ, ಕೇರಳ, ತೆಲಂಗಾಣ, ಗುಜರಾತ್ ಸೇರಿದಂತೆ ಮತ್ತಿತರ ರಾಜ್ಯಗಳು ತಮ್ಮ ಸೇವಾವಲಯಕ್ಕೆ ಸಂಬಂಧಿಸಿದ ಪ್ರಾತ್ಯಕ್ಷಿಕೆಗಳನ್ನು ಪ್ರದರ್ಶಿಸುತ್ತವೆ.